(ಈ) ಕರ್ನಾಟಕ ಸ್ಟಾಂಪು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2001ರ ಮಂಡನೆಗೆ ಅನುಮತಿ ಕೋರಿಕೆ

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, 2001ರ ಕರ್ನಾಟಕ ಸ್ಟಾಂಪು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸಲು ತಮ್ಮ ಅನುಮತಿ ಕೋರುತ್ತೇನೆ.

ಅಧ್ಯಕ್ಷರು : ಪ್ರಸ್ತಾವ ಏನೆಂದರೆ;

"2001ರ ಕರ್ನಾಟಕ ಸ್ಟಾಂಪು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಮಂಡಿಸಲು ಅನುಮತಿ ನೀಡುವುದು."

ಪ್ರಸ್ತಾವ ಅಂಗೀಕರಿಸಲ್ಪಟ್ಟಿತು ಮತ್ತು ಅನುಮತಿ ನೀಡಲಾಯಿತು

ಶ್ರೀ ಹೆಚ್.ಸಿ. ಶ್ರೀಕಂಠಯ್ಯ (ಕಂದಾಯ ಸಚಿವರು) : ಮಾನ್ಯ ಅಧ್ಯಕ್ಷರೆ, "2001ರ ಕರ್ನಾಟಕ ಸ್ಟಾಂಪು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕವನ್ನು ಸಭೆಯ ಮುಂದೆ ಮಂಡಿಸುತ್ತೇನೆ."

ಅಧ್ಯಕ್ಷರು : ವಿಧೇಯಕವನ್ನು ಮಂಡಿಸಲಾಗಿದೆ *

*ಅನುಬಂಧ -IV

ಕರ್ನಾಟಕ ವಿಧಾನಸಭೆ

ಹನ್ನೊಂದನೇ ವಿಧಾನಸಭೆ

(ಮೂರನೇ ಅಧಿವೇಶನ)

ಕರ್ನಾಟಕ ಸ್ಟಾಂಪು ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2001

ಕರ್ನಾಟಕ ಸ್ಟಾಂಪು ಅಧಿನಿಯಮ, 1957 ಮತ್ತು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ, 1959ನ್ನು ಮತ್ತಷ್ಟು ತಿದ್ದುಪಡಿ ಮಾಡಲು ಒಂದು ವಿಧೇಯಕ.

ಇಲ್ಲಿ ಇನ್ನು ಮುಂದೆ ಕಂಡುಬರುವ ಉದ್ದೇಶಗಳಿಗಾಗಿ ಕರ್ನಾಟಕ ಸ್ಟಾಂಪು ಅಧಿನಿಯಮ, 1957ನ್ನು (1957ರ ಕರ್ನಾಟಕ ಅಧಿನಿಯಮ 34) ಮತ್ತು ಕರ್ನಾಟಕ ಸಹಕಾರ ಸಂಘಗಳ ಅಧಿನಿಯಮ, 1959 (1959ರ ಕರ್ನಾಟಕ ಅಧಿನಿಯಮ 11) ಇವುಗಳನ್ನು ಮತ್ತಷ್ಟು ತಿದ್ದುಪಡಿ ಮಾಡುವುದು ಯುಕ್ತವಾಗಿರುವುದರಿಂದ;

ಇದು ಭಾರತ ಗಣರಾಜ್ಯದ ಐವತ್ತೆರಡನೇ ವರ್ಷದಲ್ಲಿ ಕರ್ನಾಟಕ ರಾಜ್ಯ ವಿಧಾನ ಮಂಡಲದಿಂದ ಈ [illegible] ಅಧಿನಿಯಮಿತವಾಗಿಲಿ:-